ತಿಂಗಳು/ ವರ್ಷ	2007–08	2008–09	2009–10	2010–11 (01.04.2010ರಿಂದ 24.02.2011ರವರೆಗೆ
ಜನವರಿ	1031.21	953.14	993.24	1119.41
ಫೆಬ್ರವರಿ	960.85	934.59	920.71	802.86 (24.02.2011 ರವರೆಗೆ)
ಮಾರ್ಚ್	1028.86	1013.20	978.23	–
ಒಟ್ಟು	**10874.84**	**10518.58**	**10402.09**	**7720.12**

ರಾಯಚೂರು ಜಿಲ್ಲೆಗೆ ವಕ್ಫ್ ಮಂಡಳಿಯಿಂದ ಬಿಡುಗಡೆಯಾಗಿರುವ ಅನುದಾನ

200 (407) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 3 ವರ್ಷಗಳಲ್ಲಿ ರಾಯಚೂರು ಜಿಲ್ಲೆಯಲ್ಲಿ ವಕ್ಫ್ ಮಂಡಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದ ಮೊತ್ತ ಎಷ್ಟು; (ವರ್ಷವಾರು ವಿವರಗಳನ್ನು ನೀಡುವುದು)

ಆ) ರಾಯಚೂರು ಜಿಲ್ಲೆಯ ವಕ್ಫ್ ಮಂಡಳಿಯು ತಾಲ್ಲೂಕು ವಕ್ಫ್ ಮಂಡಳಿಗಳಿಗೆ ನೀಡುವ ಅನುದಾನದಲ್ಲಿ ತಾರತಮ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಈ ರೀತಿಯ ತಾರತಮ್ಯ ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಪ್ರೊ. ಡಾ. ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):

ಅ) ಜಿಲ್ಲೆಯಲ್ಲಿ ವಕ್ಫ್ ಮಂಡಳಿ ಇರುವುದಿಲ್ಲ. ಜಿಲ್ಲಾ ವಕ್ಫ್ ಸಲಹಾ ಸಮಿತಿ ಇರುತ್ತದೆ. ಕಳೆದ 3 ವರ್ಷಗಳಲ್ಲಿ ರಾಯಚೂರು ಜಿಲ್ಲೆಯ ವಕ್ಫ್ ಸಲಹಾ ಸಮಿತಿಗಳಿಗೆ ಬಿಡುಗಡೆ ಮಾಡಿರುವ ಮೊತ್ತದ ವಿವರ ಈ ಕೆಳಗಿನಂತಿದೆ.

ವರ್ಷ	ಮೊತ್ತ ರೂ.
2007–08	7.66,000–00
2008–09	8,06,300–00
2009–10	8,48,400–00

ಆ) ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಸಿಂಧನೂರು ನಗರಕ್ಕೆ ಹೊಸ ಸಂಚಾರಿ ಪೊಲೀಸ್ ಠಾಣೆ

201 (408) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ನಗರಕ್ಕೆ ಹೊಸ ಸಂಚಾರಿ ಪೊಲೀಸ್ ಠಾಣೆಗೆ ಮಂಜೂರಾತಿ ನೀಡುವುದಾಗಿ ಕಳೆದ ಅಧಿವೇಶನದಲ್ಲಿ ಸರ್ಕಾರ ಭರವಸೆ ನೀಡಿರುವುದು ನಿಜವಲ್ಲವೆ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಸಂಚಾರಿ ಪೊಲೀಸ್ ಠಾಣೆಗೆ ಮಂಜೂರಾತಿ ನೀಡದಿರಲು ಕಾರಣಗಳೇನು;

ಇ) ಸಿಂಧನೂರು ನಗರದಲ್ಲಿ ಸಂಚಾರಿ ಪೊಲೀಸ್ ಠಾಣೆ ಇಲ್ಲದಿರುವುದರಿಂದ ಸಾರ್ವಜನಿಕರು ಹಾಗೂ ವಾಹನಗಳ ಸಂಚಾರಕ್ಕೆ ತೊಂದರೆಯಾಗಿ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಈ ಅಪಘಾತಗಳನ್ನು ತಡೆಗಟ್ಟಲು ಸರ್ಕಾರ ಈಗಲಾದರೂ ಸಂಚಾರಿ ಪೊಲೀಸ್ ಠಾಣೆಯನ್ನು ತೆರೆಯಲು ಕ್ರಮಕೈಗೊಳ್ಳುವುದೇ;

ಉ) ಹಾಗಿದ್ದಲ್ಲಿ, ಯಾವಾಗ ಸಂಚಾರಿ ಪೊಲೀಸ್ ಠಾಣೆಯನ್ನು ತೆರೆಯಲಾಗುವುದು?

ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು):

ಅ) ಹೌದು.

ಆ) 1. ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಡಿ 207 ಪಿಓಪಿ 2008, ದಿನಾಂಕ: 10/02/2010ರಲ್ಲಿ 2010–11ನೇ ಸಾಲಿನಲ್ಲಿ ಹೊಸ 7 ಪೊಲೀಸ್ ಠಾಣೆಗಳು, 8 ಸಂಚಾರಿ ಪೊಲೀಸ್ ಠಾಣೆಗಳು ಹಾಗೂ 10 ಪೊಲೀಸ್ ಉಪ ಠಾಣೆಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ. ಈ ಒಟ್ಟು 25 ಪೊಲೀಸ್ ಠಾಣೆಗಳಿಗೆ ತಗಲುವ ಆವರ್ತಕ ವೆಚ್ಚವು ರೂ. 16,49,49,128/–